ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**Corporate Identity Number (CIN): U40109KA1999SGC025521**

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

---

**ಓದಲಾಗಿದೆ:**

1. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/ಬಿ4/ಎಸ್ಎ5/6262/93-94 ದಿನಾಂಕ: 27.03.2002.
2. ಸರ್ಕಾರದ ಆದೇಶ ಸಂಖ್ಯೆ: ಆಇ 1(ಇ) ಸೇನಿಸೇ 2019 ದಿನಾಂಕ: 16.07.2019.
3. ನಿಗಮ ಕಾರ್ಯಾಲಯದ ದಿನಾಂಕ: 22.02.2022 ರ ಟಿಪ್ಪಣಿ.

**ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/1996-97, ಬೆಂಗಳೂರು, ದಿನಾಂಕ:** 25 FEB 2022

ಅಂತರಾಷ್ಟ್ರೀಯ, ರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳಲ್ಲಿ ಕ್ರೀಡಾಪಟುವಾಗಿ ಭಾಗವಹಿಸಲು ವಿಶೇಷ ಸಾಂದರ್ಭಿಕ ರಜೆ ಮಂಜೂರಾತಿಗಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958 ರ ಅನುಬಂಧ-ಬಿ ಯ ನಿಯಮ (10) (Xiv) ರ ಅನುಬಂಧದಲ್ಲಿರುವ ಕ್ರೀಡಾ ಕೂಟಗಳ ಪಟ್ಟಿಯಲ್ಲಿನ ಕ್ರಮ ಸಂಖ್ಯೆ: 53 ರ ನಂತರ ಕ್ರಮ ಸಂಖ್ಯೆ: 54 ರಲ್ಲಿ **ಪ್ಯಾರಾಲಿಂಪಿಕ್ ಕಮಿಟಿ ಆಫ್ ಇಂಡಿಯಾ** ಸಂಸ್ಥೆಯನ್ನು ಸೇರ್ಪಡೆಗೊಳಿಸಿ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ: ಆಇ 1(ಇ) ಸೇನಿಸೇ 2019 ದಿನಾಂಕ: 16.07.2019 ರ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಮುಂದುವರೆದು, ಕವಿಪ್ರನಿನಿ ನೌಕರರ ಸೇವಾ ನಿಯಮಗಳ ಅಪೆಂಡಿಕ್ಸ್-8 ರ ಭಾಗ-1 ರ ಪಟ್ಟಿಯಲ್ಲಿ ತಿಳಿಸಲಾಗಿರುವ ಕ್ರೀಡಾ ಕೂಟಗಳ ಹೆಸರಿನ ಪಟ್ಟಿಗೆ ಮೇಲ್ಕಂಡ ಸಂಸ್ಥೆಯನ್ನು ಸೇರ್ಪಡೆಗೊಂಡಿದೆಯೆಂದು ಪರಿಗಣಿಸತಕ್ಕದ್ದು.

ಸರ್ಕಾರದ ದಿನಾಂಕ: 16.07.2019 ರ ಆದೇಶವನ್ನು ಈ ಆದೇಶಕ್ಕೆ **'ಅನುಬಂಧ'** ಎಂದು ಲಗತ್ತಿಸಲಾಗಿದೆ.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ನಿರ್ದೇಶಕರು (ಹಣಕಾಸು), ಬೆಸ್ಕಾಂ, ಬೆಂಗಳೂರು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
6. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

7. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
9. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.

**ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/5411/96-97,**
**ದಿನಾಂಕ: 25.02.2022 ರ ಅನುಬಂಧ**

**ಕರ್ನಾಟಕ ಸರ್ಕಾರ**

**ವಿಷಯ:** ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ಅನುಬಂಧ-ಬಿ ರಲ್ಲಿನ ಕ್ರೀಡಾ ಕೂಟಗಳ ಪಟ್ಟಿಯ ಜೊತೆಗೆ **"ಪ್ಯಾರಾಲಿಂಪಿಕ್ ಕಮಿಟಿ ಆಫ್ ಇಂಡಿಯಾ"** ಸೇರಿಸುವ ಬಗ್ಗೆ.

**ಓದಲಾಗಿದೆ:** 1. ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:F.No.14034/01/2013-Estt. (D), Dated 03.10.2013.

2. ಸರ್ಕಾರಿ ಆದೇಶ ಸಂಖ್ಯೆ: ಎಫ್.ಡಿ 13 ಎಸ್.ಆರ್.ಎಸ್ 1994, ದಿನಾಂಕ 16-12-1994.

ಪ್ರಸ್ತಾವನೆ:-

ಮೇಲೆ ಓದಲಾದ ಅಧಿಕೃತ ಜ್ಞಾಪನ (1)ರಲ್ಲಿ ಕೇಂದ್ರ ಸರ್ಕಾರವು, ಅಂತರಾಷ್ಟ್ರೀಯ, ರಾಷ್ಟ್ರೀಯ ಮಟ್ಟದ ಕ್ರೀಡಾ ಕೂಟಗಳಲ್ಲಿ ಕ್ರೀಡಾ ಪಟುವಾಗಿ ಭಾಗವಹಿಸುವ ಸರ್ಕಾರಿ ನೌಕರರಿಗೆ ಪ್ರೋತ್ಸಾಹದಾಯಕ ಸೌಲಭ್ಯಗಳಾಗಿ ವಿಶೇಷ ಸಾಂದರ್ಭಿಕ ರಜೆ, ಪ್ರಯಾಣ ಭತ್ಯೆಗಳ ಮಂಜೂರಾತಿ ಪರಿಗಣನೆಗೆ ಸಂಬಂಧಿಸಿದಂತೆ ಸದರಿ ಅಧಿಕೃತ ಜ್ಞಾಪನದಲ್ಲಿ ಹೆಸರಿಸಿರುವ 65 ಕ್ರೀಡಾ ಕೂಟ ಸಂಸ್ಥೆಗಳು ಆಯೋಜಿಸುವ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪ್ರಥಮ ಮತ್ತು ದ್ವಿತೀಯರಾಗಿ ವಿಜೇತರಾದ ಕ್ರೀಡಾ ಪಟುಗಳಿಗೆ ವೇತನ ಬಡ್ತಿ ಮುಂತಾದ ಸೌಲಭ್ಯಗಳನ್ನು ಮಂಜೂರು ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿದೆ. ಸದರಿ ಅಧಿಕೃತ ಜ್ಞಾಪನದಲ್ಲಿ ಒಳಪಡಿಸಿರುವ 65 ಕ್ರೀಡಾ ಸಂಸ್ಥೆಗಳಲ್ಲಿ **"ಪ್ಯಾರಾಲಿಂಪಿಕ್ ಕಮಿಟಿ ಆಫ್ ಇಂಡಿಯಾ"** (Paralympic Committee of India )ನ್ನು ಸಹ ಸೇರಿಸಿ ಭಾರತ ಸರ್ಕಾರವು ಅಧಿಸೂಚಿಸಿದೆ.

ಮೇಲೆ ಓದಲಾದ ಸರ್ಕಾರಿ ಆದೇಶ (2) ರಲ್ಲಿನ ಅನುಬಂಧದಲ್ಲಿರುವ ಕ್ರೀಡಾ ಕೂಟಗಳ ಪಟ್ಟಿಯಲ್ಲಿ **ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ಅನುಬಂಧ-ಬಿ** ಯಲ್ಲಿನ [ನಿಯಮ (10)(xiv)] 53 ಕ್ರೀಡಾ ಕೂಟಗಳ ಪಟ್ಟಿಯಲ್ಲಿ **ಪ್ಯಾರಾಲಿಂಪಿಕ್ ಕಮಿಟಿ ಆಫ್ ಇಂಡಿಯಾ** ಒಳಗೊಂಡಿರುವುದಿಲ್ಲ. ಮೇಲೆ ಓದಲಾದ ಅಧಿಕೃತ ಜ್ಞಾಪನ (1)ರಲ್ಲಿ ಕೇಂದ್ರ ಸರ್ಕಾರವು **"ಪ್ಯಾರಾಲಿಂಪಿಕ್ ಕಮಿಟಿ ಆಫ್ ಇಂಡಿಯಾ"** ಸಂಸ್ಥೆಯನ್ನು ಸೇರ್ಪಡೆ ಮಾಡಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಸಹ **ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ಅನುಬಂಧ-ಬಿ** ಯ ನಿಯಮ (10)(xiv)ರಲ್ಲಿನ 53 ಕ್ರೀಡಾ ಕೂಟಗಳ ಪಟ್ಟಿಯ ಜೊತೆಗೆ ಸೇರಿಸಲು ನಿರ್ಧರಿಸಿದ್ದು, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 1 (ಇ) ಸೇನಿಸೇ 2019, ಬೆಂಗಳೂರು, ದಿನಾಂಕ:16.07.2019**

**ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1958ರ ಅನುಬಂಧ-ಬಿ** ಯ ನಿಯಮ (10)(xiv) ರ ಅನುಬಂಧದಲ್ಲಿರುವ ಕ್ರೀಡಾ ಕೂಟಗಳ ಪಟ್ಟಿಯಲ್ಲಿನ ಕ್ರಮ ಸಂಖ್ಯೆ: 53ರ ನಂತರ ಈ ಕೆಳಕಂಡಂತೆ ಕ್ರಮಸಂಖ್ಯೆ:54 ಎಂಬುದಾಗಿ ಸೇರ್ಪಡೆಗೊಳಿಸಿ ಆದೇಶಿಸಿದೆ.

...2/-

| | | |
|---|---|---|
| ಕ್ರಮ ಸಂಖ್ಯೆ 54 | ಭಾರತೀಯ ಪ್ಯಾರಾಲಿಂಪಿಕ್ ಕಮಿಟಿ, ಸಂಖ್ಯೆ: 25/1, 9ನೇ ಅಡ್ಡ ರಸ್ತೆ, ಜೆ.ಪಿ.ನಗರ, 2ನೇ ಹಂತ, ಬೆಂಗಳೂರು-560078 | Paralympic Committee of India, No.25/1, 9th Cross, J.P.Nagar, 2nd Phase, Bangalore – 560 078. |

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ಅನುಬಂಧ-ಬಿ ಗೆ ಅವಶ್ಯಕ ಸೇರ್ಪಡೆಯನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B.S
(ಬಿ.ಎಸ್.ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1)

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
7. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
8. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
14. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
23. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ <u>www.finance.kar.nic.in</u> ವೀಕ್ಷಿಸಿ (ಕ್ರಮ ಸಂಖ್ಯೆ: 7 ರಿಂದ 14 ರವರೆಗೆ ಪತ್ರದ ಮೂಲಕ)**